ಕರ್ನಾಟಕ ಸರ್ಕಾರ

ಸಂಖ್ಯೆ: ಆರ್‌ಡಿ ೩೪೨ ಜಿಎಂಎಂ ೨೦೦೧.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: ೨೮.೦೯.೨೦೦೧.

## ಸುತ್ತೋಲೆ

ವಿಷಯ: ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಜನ ಸಂಪರ್ಕ ಸಭೆಗಳನ್ನು ನಡೆಸುವ ಬಗ್ಗೆ – ಸೂಚನೆಗಳು.

...

(೧) ಸಾರ್ವಜನಿಕರು ಹಾಗೂ ಸರ್ಕಾರಿ ಆಡಳಿತ ಯಂತ್ರಗಳ ಸಮಾಗಮ, ಆಡಳಿತದಲ್ಲಿ ಪಾರದರ್ಶಕತೆ, ಸಾರ್ವಜನಿಕರಿಗೆ ಸರ್ಕಾರದ ಯೋಜನೆಗಳ ಪರಿಚಯ ಹಾಗೂ ಅದರ ಸೌಲಭ್ಯಗಳ ವಿವರಣೆಗೆ ಜನಸಂಪರ್ಕ ಸಭೆಗಳು ಬಹಳ ಅನುಕೂಲಕರವಾಗುತ್ತದೆ. ಚಿತ್ರದುರ್ಗ ಜಿಲ್ಲೆಯ ಸಮಸ್ಯೆಗಳ ಕುರಿತು ದಿನಾಂಕ ೬.೭.೨೦೦೧ ರಂದು ಮಾನ್ಯ ಮುಖ್ಯಮಂತ್ರಿಗಳು ನಡೆಸಿದ ಸಭೆಯಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಜನ ಸಂಪರ್ಕ ಸಭೆಗಳನ್ನು ನಡೆಸಬೇಕೆಂದು ತೀರ್ಮಾನವನ್ನು ಕೈಗೊಳ್ಳಲಾಗಿದೆ.

(೨) ಸಾರ್ವಜನಿಕರಿಗೆ ಸರ್ಕಾರದ ವಿವಿಧ ಯೋಜನೆಗಳ ಪರಿಚಯ, ಸರ್ಕಾರ ಅನುಷ್ಠಾನಗೊಳಿಸುತ್ತಿರುವ ವಿವಿಧ ಕಾರ್ಯಕ್ರಮಗಳು ಹಾಗೂ ಅವರ ಸೌಲಭ್ಯಗಳ ಬಗ್ಗೆ ಮಾಹಿತಿಯನ್ನು ನೀಡಿ ಸಾರ್ವಜನಿಕರಿಂದ ಅರ್ಜಿಗಳನ್ನು ಸ್ವೀಕರಿಸಿ ಅರ್ಹ ಫಲಾನುಭವಿಗಳಿಗೆ ಅದರ ಪ್ರಯೋಜನವನ್ನು ವಿತರಣೆ ಮಾಡುವ ಬಗ್ಗೆ ತಾಲ್ಲೂಕುವಾರು ಹೋಬಳಿ ಮಟ್ಟದಲ್ಲಿ ಒಂದು ಸಭೆಯನ್ನು ನಡೆಸುವುದೇ ಜನ ಸಂಪರ್ಕ ಸಭೆಯ ಮುಖ್ಯ ಗುರಿ.

(೩) ಜನ ಸಂಪರ್ಕ ಸಭೆಗಳನ್ನು ನಡೆಸುವ ಮೂಲಕ ಜನ ಸಾಮಾನ್ಯರ ಬಳಿಗೆ ಸರ್ಕಾರದ ಆಡಳಿತ ಯಂತ್ರವನ್ನು ಕರೆದೊಯ್ಯಲು, ಆಡಳಿತದಲ್ಲಿ ಪಾರದರ್ಶಕತೆ ತರುವುದು, ಸಾರ್ವಜನಿಕರಿಗೆ ಸರ್ಕಾರದ ವಿವಿಧ ಯೋಜನೆಗಳ ಪ್ರಯೋಜನ ಸೌಲಭ್ಯ ಪಡೆಯಲು ಅರ್ಹತೆ ಬಗ್ಗೆ ಮಾಹಿತಿ ನೀಡುವುದು, ಶ್ರೀ ಸಾಮಾನ್ಯರ ಕೆಲಸವನ್ನು ಸರಳವಾಗಿ ಕಾರ್ಯಗತಗೊಳಿಸುವುದು ಜನ ಸಂಪರ್ಕ ಸಭೆಯ ಮೂಲ ಉದ್ದೇಶ. ಆದುದರಿಂದ ಎಲ್ಲಾ ಜಿಲ್ಲೆಗಳಲ್ಲೂ ತಾಲ್ಲೂಕುವಾರು ಹೋಬಳಿ ಮಟ್ಟದಲ್ಲಿ ತಿಂಗಳಿಗೆ ಒಂದರಂತೆ ಜನ ಸಂಪರ್ಕ ಸಭೆಗಳನ್ನು ನಡೆಸತಕ್ಕದ್ದು. ಜನ ಸಂಪರ್ಕ ಸಭೆಗಳನ್ನು ನಡೆಸುವ ಬಗ್ಗೆ ಈ ಕೆಳಕಂಡ ಸೂಚನೆಗಳನ್ನು ನೀಡಲಾಗಿದೆ.

(೪) ಜನ ಸಂಪರ್ಕ ಸಭೆಗಳನ್ನು ತಾಲ್ಲೂಕುವಾರು ಹೋಬಳಿ ಮಟ್ಟದಲ್ಲಿ ನಡೆಸುವ ಬಗ್ಗೆ ದಿನಾಂಕ ಹಾಗೂ ಸಮಯವನ್ನು ಸಾಕಷ್ಟು ಮುಂಚಿತವಾಗಿ ನಿಗದಿಪಡಿಸಿ ಸಾರ್ವಜನಿಕರಿಗೆ ವಿವಿಧ ಯೋಜನೆಗಳನ್ವಯ ಸೌಲಭ್ಯಗಳನ್ನು ಪಡೆಯಲು ಸಂಬಂಧಪಟ್ಟ ಇಲಾಖಾಧಿಕಾರಿಗಳಿಗೆ ಅರ್ಜಿಗಳನ್ನು ಸಲ್ಲಿಸಲು ಹಾಗೂ ಅಂತಹ ಅರ್ಜಿಗಳನ್ನು ಸಾರ್ವಜನಿಕರಿಂದ ಪಡೆದು, ನಿಯಮಗಳನುಸಾರ ಅರ್ಜಿದಾರರು ಅರ್ಹರೇ ಎಂಬ ಬಗ್ಗೆ ಪರಿಶೀಲಿಸಿ, ಅರ್ಹ ವ್ಯಕ್ತಿಗಳಿಗೆ ಯೋಜನೆಗಳ ಸೌಲಭ್ಯವನ್ನು ವಿತರಿಸುವ

...... ೨.

ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ
ನಿರ್ದೇಶಕರವರ ಕಾರ್ಯಾಲಯ,
ಕೃಷ್ಣರಾಜೇಂದ್ರ ವೃತ್ತ,
ಬೆಂಗಳೂರು-560 001.



ಬಗ್ಗೆ ಸಂಬಂಧಪಟ್ಟ ಇಲಾಖಾಧಿಕಾರಿಗಳಿಗೆ ಕಾರ್ಯಸೂಚಿಯ ಸೂಕ್ತ ರೂಪರೇಷೆಗಳು, ಸಾರ್ವಜನಿಕರಿಂದ ಸ್ವೀಕರಿಸಲಾದ ಅಹವಾಲುಗಳ ವಿವರಗಳನ್ನು ಮೊದಲೇ ಕಳುಹಿಸಿಕೊಡುವುದಲ್ಲದೇ, ಸಾರ್ವಜನಿಕರಿಗೆ ಪ್ರಚಾರ ಮಾಧ್ಯಮಗಳ ಮುಖಾಂತರ, ಟಾಂ ಟಾಂ ಮುಖಾಂತರ, ಸೂಚನಾಫಲಕಗಳ ಮುಖಾಂತರ ಗಮನಕ್ಕೆ ತರತಕ್ಕದ್ದು.

(೬) ಸದರಿ ದಿನದಂದು ಆಯಾ ತಾಲ್ಲೂಕು ಮಟ್ಟದ, ಜಿಲ್ಲಾ ಮಟ್ಟದ ಸಂಬಂಧಪಟ್ಟ ಇಲಾಖೆಯ ಎಲ್ಲಾ ಅಧಿಕಾರಿಗಳು ಜನ ಸಂಪರ್ಕ ಸಭೆಯಲ್ಲಿ ತಪ್ಪದೇ ಹಾಜರಿದ್ದು, ತಮ್ಮ ತಮ್ಮ ಇಲಾಖೆಗಳಿಗೆ ಸಂಬಂಧಪಟ್ಟಂತೆ ಮಾಹಿತಿಗಳನ್ನು ನೀಡಿ ಅರ್ಹ ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಿಸಲು ಕ್ರಮಕೈಗೊಳ್ಳತಕ್ಕದ್ದು.

(೭) ಜನ ಸಂಪರ್ಕ ಸಭೆಗಳನ್ನು ನಡೆಸುವ ಬಗ್ಗೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಆಯಾ ಜಿಲ್ಲೆಗಳಲ್ಲಿ ನಡೆಸುವ ಜನ ಸಂಪರ್ಕ ಸಭೆಗಳಿಗೆ ವಿಸ್ತೃತವಾದ ಕಾರ್ಯಸೂಚಿಯನ್ನು ಸಿದ್ಧಪಡಿಸತಕ್ಕದ್ದು.

(೮) ಮೇಲ್ಕಂಡ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

(ಸಹಿ)
(ಸಿ. ಚಿಕ್ಕಣ್ಣ)
ಸರ್ಕಾರದ ಕಾರ್ಯದರ್ಶಿ,
ಕಂದಾಯ ಇಲಾಖೆ.

ಜ್ಞಾಪನ

ಕ್ರ.ಸಂ. ಕಾಂ:ಸುವಿವ.೧೬:೨೦೦೧—೨೦೦೨. ದಿನಾಂಕ: ೨೦.೧೦.೨೦೦೧.

ಪ್ರತಿಯನ್ನು:—

ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ. ನಿಮ್ಮ ಕಾರ್ಯವ್ಯಾಪ್ತಿಯಲ್ಲಿ ಕಂದಾಯ ಇಲಾಖೆ : ಅಧಿಕಾರಿಗಳು ಆಯೋಜಿಸುವ ಜನ ಸಂಪರ್ಕ ಸಭೆಯಲ್ಲಿ ತಪ್ಪದೇ ಹಾಜರಾಗತಕ್ಕದ್ದು. ಹಾಗೂ ಅವಶ್ಯವಿದ್ದಲ್ಲಿ ಇಲಾಖೆಗೆ ಸಂಬಂಧಿಸಿದ ಮಾಹಿತಿ ಅಥವಾ ಅಭಿಪ್ರಾಯ ನೀಡುವಂತೆ ತಿಳಿಸಲಾಗಿದೆ.

ನಿರ್ದೇಶಕರು,
ಭೂಮಾಪನ ಕಂದಾಯ ವ್ಯವಸ್ಥೆ ಮತ್ತು
ಭೂದಾಖಲೆಗಳು, ಬೆಂಗಳೂರು.